ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ/ಶೈವಿ/22/ಸುತ್ತೋಲೆ/2023-24

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಉನ್ನತ ಶಿಕ್ಷಣ ಸೌಧ, ಶೇಷಾದ್ರಿ ರಸ್ತೆ
ಬೆಂಗಳೂರು. ದಿನಾಂಕ: 03.06.2023

## ಸುತ್ತೋಲೆ

ವಿಷಯ : ವಿಶ್ವ ಪರಿಸರ ದಿನ-2023 (ಜೂನ್-5)ರ ವರ್ಚುವಲ್ ಪ್ಯಾನೆಲ್ ಚರ್ಚೆಯಲ್ಲಿ ಕಡ್ಡಾಯವಾಗಿ ಭಾಗವಹಿಸುವುದರ ಕುರಿತು.

ಉಲ್ಲೇಖ : ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು, ರವರ ಪತ್ರ ಸಂಖ್ಯೆ: ಕಪಂರಾಆ/ಅಭಿ/ಜೀ.ವ್ಯ./228/2023 ದಿನಾಂಕ:01.06.2023.

*****

ವಿಶ್ವ ಪರಿಸರ ದಿನವು ಪರಿಸರ ರಕ್ಷಣೆ ಮತ್ತು ಸಂರಕ್ಷಣೆಗಾಗಿ ಜಾಗೃತಿ ಮತ್ತು ಕ್ರಿಯೆಯನ್ನು ಉತ್ತೇಜಿಸುವ ಜಾಗತಿಕ ಆಚರಣೆಯಾಗಿದೆ. ಈ ಕುರಿತಾಗಿ ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ ಯುನಿಸೆಫ್ ಬೆಂಬಲದೊಂದಿಗೆ ಕರ್ನಾಟಕ ರಾಜ್ಯಕ್ಕೆ ಕುರಿತಾದ ಹವಾಮಾನ ಬದಲಾವಣೆ ಹಾಗೂ ಮಿಷನ್ ಲೈಫ್ 75 ಕ್ರಿಯಾಶೀಲ ಅಂಶಗಳ ಕುರಿತಾಗಿ ಪ್ಯಾನೆಲ್ ಚರ್ಚೆಯನ್ನು ಆಯೋಜಿಸಲಾಗಿದೆ.

ಪ್ಯಾನೆಲ್ ಚರ್ಚೆಯು ಕರ್ನಾಟಕ ರಾಜ್ಯದ ಚೌಕಟ್ಟಿನೊಳಗೆ ಹವಾಮಾನ ಬದಲಾವಣೆಯನ್ನು ಸಂದರ್ಭೋಚಿತಗೊಳಿಸುವುದರ ಮೇಲೆ ಕೇಂದ್ರೀಕರಿಸುತ್ತದೆ. ಅದರ ಪರಿಣಾಮಗಳು, ಸವಾಲುಗಳು ಒಳಗೊಂಡಂತೆ ಜನರಲ್ಲಿ ಮಿಷನ್ ಲೈಫ್‌ನ 75 ಕ್ರಿಯಾಶೀಲ ಅಂಶಗಳಲ್ಲಿ ವಿವರಿಸಿದಂತೆ ಸುಸ್ಥಿರ ಜೀವನಶೈಲಿಯನ್ನು ಅಳವಡಿಸಿಕೊಳ್ಳುವುದರ ಪ್ರಾಮುಖ್ಯತೆಯ ಬಗ್ಗೆ ಜನರಲ್ಲಿ ಅರಿವು ಮೂಡಿಸುವ ಸಲುವಾಗಿ ಆಯೋಜನೆ ಮಾಡಲಾಗಿದೆ. ಈ ಕಾರ್ಯಕ್ರಮದ ಮೂಲಕ ಗ್ರಾಮೀಣ ಪ್ರದೇಶದ ಮಹಿಳೆಯರು, ವಿದ್ಯಾರ್ಥಿ-ವಿದ್ಯಾರ್ಥಿನಿಯರು, ವಿವಿಧ ಇಲಾಖೆಗಳ ಸರ್ಕಾರಿ ಅಧಿಕಾರಿಗಳು ಮತ್ತು ಸಾರ್ವಜನಿಕರಲ್ಲಿ ಹವಾಮಾನ ಬದಲಾವಣೆ ಹಾಗೂ ಮಿಷನ್ ಲೈಫ್‌ನ 75 ಕ್ರಿಯಾಶೀಲ ಅಂಶಗಳನ್ನು ಕುರಿತು ಜಾಗೃತಿ ಮೂಡಿಸುವಲ್ಲಿ ಸಹಾಯ ಮಾಡುತ್ತದೆ ಎಂದು ಉಲ್ಲೇಖಿತ ಪತ್ರದಲ್ಲಿ ಸೂಚಿಸಲಾಗಿರುತ್ತದೆ.

ಆದುದರಿಂದ ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವಂತಹ ಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕರು, ವಿದ್ಯಾರ್ಥಿಗಳು ಹಾಗೂ ಇಲಾಖೆಯ ಸಿಬ್ಬಂದಿ ವರ್ಗದವರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿ ಕಾರ್ಯಕ್ರಮದ ಸದುಪಯೋಗಪಡಿಸಿಕೊಳ್ಳುವಂತೆ ಸೂಚಿಸಲಾಗಿದೆ.

ಕಾರ್ಯಕ್ರಮದಲ್ಲಿ ಭಾಗವಹಿಸಲು ANSSIRD & PR ಯೂಟ್ಯೂಬ್ ಚಾನಲ್ ನಲ್ಲಿ ವೀಕ್ಷಿಸುವುದು.

ಕಾರ್ಯಕ್ರಮದ ಶೀರ್ಷಿಕೆ : ವಿಶ್ವಪರಿಸರ ದಿನ – ಹವಾಮಾನ ಬದಲಾವಣೆ ಮತ್ತು ಪರಿಸರ ಸ್ನೇಹಿ ಜೀವನಶೈಲಿ, ದಿನಾಂಕ: 05.06.2023 ಸಮಯ ಬೆಳಿಗ್ಗೆ: 11.00 ಗಂಟೆಯಿಂದ 1.00 ಗಂಟೆಯವರೆಗೆ

ಲಿಂಕ್: https://www.youtube.com/live/leUqijAylWs?feature=share

....2

ಕಾರ್ಯಕ್ರಮವಾದ ಬಳಿಕ ಭಾಗವಹಿಸಿದ್ದ ಜಿಲ್ಲಾ / ತಾಲ್ಲೂಕಿನ ಅಧಿಕಾರಿಗಳು ಭಾಗವಹಿಸಿದ್ದ ಸಿಬ್ಬಂದಿ ವರ್ಗದವರ ಸಂಖ್ಯೆ ಹಾಗೂ ಮಾಹಿತಿಯನ್ನು ಈ ಕೆಳಗೆ ನೀಡಲಾದ ಲಿಂಕ್‌ನಲ್ಲಿ ನಮೂದಿಸುವುದು ಕಡ್ಡಾಯವಾಗಿರುತ್ತದೆ.

ಭಾಗವಹಿಸುವಿಕೆಯನ್ನು ನಮೂದಿಸುವ ವಿಧಾನ: ಈ ಮುಂದಿನ ಲಿಂಕ್‌ನ್ನು ಬಳಸಿ "ಫೀಲ್ಡ್ ಆಫೀಸ್" ಎಂಬುದನ್ನು ಆಯ್ಕೆ ಮಾಡಿ ನೋಂದಣಿ ಮಾಡಿ ಭಾಗವಹಿಸುವಿಕೆಯನ್ನು ಖಚಿತಪಡಿಸುವುದು ಕಡ್ಡಾಯವಾಗಿರುತ್ತದೆ.

ಲಿಂಕ್ : https://merilife.org/login

(ಟಿಪ್ಪಣಿ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ:-

1. ರಾಜ್ಯದ ಎಲ್ಲಾ ಸರ್ಕಾರಿ/ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
2. ಪ್ರಾದೇಶಿಕ ಜಂಟಿ ನಿರ್ದೇಶಕರು, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ.
3. ಕೇಂದ್ರ ಕಛೇರಿಯ ಎಲ್ಲಾ ಅಧಿಕಾರಿಗಳು / ಸಿಬ್ಬಂದಿ ವರ್ಗದವರುಗಳಿಗೆ, ಬೆಂಗಳೂರು.
4. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು , ಕಾ.ಶಿ.ಇ ಕೇಂದ್ರ ಕಛೇರಿ ಬೆಂಗಳೂರು – ಇಲಾಖಾ ವೆಬ್‌ಸೈಟ್ ನಲ್ಲಿ ಪ್ರಕಟಿಸಲು ತಿಳಿಸಲಾಗಿದೆ.

ಪ್ರತಿಯನ್ನು:

1. ಆಯುಕ್ತರ ಆಪ್ತ ಕಾರ್ಯದರ್ಶಿಗಳು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಕಾಳಿದಾಸ ಮಾರ್ಗ, ಕೆ.ಜಿ.ರಸ್ತೆ, ಬೆಂಗಳೂರು – 560 009.
2. ಕಛೇರಿ ಪ್ರತಿ.